ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಆಯುಷ್ ವೈದ್ಯರು

282 (315)

ಡಾ: ಹೆಚ್.ಸಿ.ಮಹದೇವಪ್ಪ, (ಟಿ. ನರಸೀಪುರ)

ಅ) ರಾಜ್ಯದಲ್ಲಿ 2005ನೇ ಸಾಲಿನಿಂದ ಇದುವರೆವಿಗೂ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಎನ್.ಆರ್.ಹೆಚ್.ಎಂ. ಆಯುಷ್ ವೈದ್ಯರನ್ನು ಸರ್ಕಾರಿ ನೌಕರರೆಂದು ಸರ್ಕಾರ ಪರಿಗಣಿಸಿದೆಯೇ;

ಆ) ಹಾಗಿದ್ದಲ್ಲಿ, ಇವರುಗಳಿಗೆ ಸರ್ಕಾರ ಸೇವಾ ಭದ್ರತೆ ಇತರೆ ಸೌಲಭ್ಯಗಳನ್ನು ಒದಗುತ್ತಿದೆಯೇ;

ಇ) ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ವೈದ್ಯರುಗಳನ್ನು ಖಾಯಂಗೊಳಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಈ) ಹಾಗಿದ್ದಲ್ಲಿ, ಯಾವಾಗ ಖಾಯಂಗೊಳಿಸಲಾಗುವುದು;

ಉ) ಹಾಗಾದರೆ ಈ ವೈದ್ಯರುಗಳನ್ನು ಖಾಯಂಗೊಳಿಸಲು ಸರ್ಕಾರಕ್ಕಿರುವ ತೊಂದರೆಗಳೇನು?

ಶ್ರೀ ಅರವಿಂದ ಲಿಂಬಾವಳಿ

(ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಇಲ್ಲ

ಆ) ಉದ್ಭವಿಸುವುದಿಲ್ಲ

ಇ) ಇಲ್ಲ

ಈ) ಉದ್ಭವಿಸುವುದಿಲ್ಲ

ಉ) ಎನ್.ಆರ್.ಹೆಚ್.ಎಂ. ಯೋಜನೆಯು ಕೇಂದ್ರ ಸರ್ಕಾರದ ಕಾರ್ಯಕ್ರಮವಾಗಿದ್ದು, ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಅಲೋಪತಿಕ್ ವೈದ್ಯರಂತೆಯೇ ಆಯುಷ್ ವೈದ್ಯರನ್ನು ಗುತ್ತಿಗೆ ಆಧಾರದ ಮೇಲೆ ಆಸ್ಪತ್ರೆಗಳ ಆರೋಗ್ಯ ರಕ್ಷಾ ಸಮಿತಿಗಳ ಮೂಲಕ ನೇಮಿಸಿಕೊಳ್ಳಲಾಗಿದೆ. ಇವು ಮಂಜೂರಾದ ಹುದ್ದೆಗಳಾಗಿರುವುದಿಲ್ಲವಾದ್ದರಿಂದ ಖಾಯಂಗೊಳಿಸಲು ನಿಯಮಾನುಸಾರ ಸಾಧ್ಯವಾಗುವುದಿಲ್ಲ.